## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಸಚಿವಾಲಯವನ್ನೊಳಗೊಂಡಂತೆ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆಗಳು/ಶಾಸನಬದ್ಧ ಸಂಸ್ಥೆಗಳು/ವಿಭಾಗ/ಜಿಲ್ಲಾ ಮಟ್ಟದ ಕಛೇರಿಗಳಲ್ಲಿ ಸೃಜಿಸಲಾಗಿರುವ ಜಾಗೃತ ಕೋಶಗಳ (Vigilance Cells) ಮುಖ್ಯಸ್ಥರಾದ **ಮುಖ್ಯ ಜಾಗೃತ ಅಧಿಕಾರಿ ಹಾಗು ಜಾಗೃತ ಅಧಿಕಾರಿಗಳಿಗೆ** ನಿರ್ದಿಷ್ಟಪಡಿಸಿದ್ದ **ಕರ್ತವ್ಯಗಳನ್ನು ಪರಿಷ್ಕರಿಸುವ** ಕುರಿತು.

****

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿನಾಂಕ:14.03.2016.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016, ದಿನಾಂಕ:22.06.2016.
3. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016(ಭಾ-1), ದಿನಾಂಕ:06.07.2016.

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳ(Anti Corruption Bureau)ವನ್ನು ಸೃಜಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:22.06.2016ರ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿನಾಂಕ:14.03.2016ರ ಆದೇಶ ಭಾಗದ ಖಂಡಿಕೆ 7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಸದರಿ ಆದೇಶದನ್ವಯ ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳು, ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆಗಳು/ಶಾಸನಬದ್ಧ ಸಂಸ್ಥೆಗಳ ಕೇಂದ್ರಸ್ಥಾನದ ಕಛೇರಿಗಳಲ್ಲಿ ಹಾಗೂ ಅವುಗಳ ವ್ಯಾಪ್ತಿಗೊಳಪಡುವ ವಿಭಾಗ ಮತ್ತು ಜಿಲ್ಲಾ ಮಟ್ಟದ ಕಛೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದೆಂದೂ ಹಾಗೂ ಆಯಾ ಇಲಾಖಾ/ಶಾಸನಬದ್ಧ ಸಂಸ್ಥೆಗಳ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) ಸದರಿ ಜಾಗೃತ ಕೋಶದ ಮುಖ್ಯ ಜಾಗೃತ ಅಧಿಕಾರಿ (Chief Vigilance Officer)ಯನ್ನಾಗಿ ಹಾಗೂ ವಿಭಾಗ/ಜಿಲ್ಲಾ ಮಟ್ಟದ ಕಛೇರಿಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು(officer next in seniority) ಜಾಗೃತ ಅಧಿಕಾರಿ(Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ:06.07.2016ರ ಆದೇಶದಲ್ಲಿ, ಕರ್ನಾಟಕ ಸರ್ಕಾರದ ಸಚಿವಾಲಯವನ್ನೊಳಗೊಂಡಂತೆ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆಗಳು/ಶಾಸನಬದ್ಧ ಸಂಸ್ಥೆಗಳು/ವಿಭಾಗ/ಜಿಲ್ಲಾ ಮಟ್ಟದ ಕಛೇರಿಗಳಲ್ಲಿ ಸೃಜಿಸಲಾಗಿರುವ ಜಾಗೃತ ಕೋಶಗಳ (Vigilance Cells) ಮುಖ್ಯಸ್ಥರಾದ **ಮುಖ್ಯ ಜಾಗೃತ ಅಧಿಕಾರಿ** ಹಾಗು **ಜಾಗೃತ ಅಧಿಕಾರಿಗಳ** ಕರ್ತವ್ಯಗಳನ್ನು ನಿರ್ದಿಷ್ಟಪಡಿಸಲಾಗಿದೆ. ಸದರಿ ಆದೇಶದನ್ವಯ ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳ **ಮುಖ್ಯ ಜಾಗೃತ**

**ಅಧಿಕಾರಿಗಳು** ತಮ್ಮ ಆಡಳಿತ ವ್ಯಾಪ್ತಿಗೊಳಪಡುವ ಎಲ್ಲಾ ಕ್ಷೇತ್ರ ಇಲಾಖೆಗಳ **ಮುಖ್ಯ ಜಾಗೃತ ಅಧಿಕಾರಿಗಳಿಂದ ಸದರಿ ಆದೇಶಕ್ಕೆ** ಲಗತ್ತಿಸಿರುವ ಪ್ರಪತ್ರ 1ರಿಂದ 4 ರಲ್ಲಿ ಮಾಹಿತಿಯನ್ನು ಪಡೆದು ಕ್ರೋಢೀಕರಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಜಾಗೃತ ವಿಭಾಗಕ್ಕೆ **ತ್ರೈಮಾಸಿಕ** ವರದಿಯನ್ನು ಸಲ್ಲಿಸಬೇಕಾಗಿರುತ್ತದೆ.

ಮುಖ್ಯ ಜಾಗೃತ ಅಧಿಕಾರಿ/ಜಾಗೃತ ಅಧಿಕಾರಿಗಳಿಗೆ ಯಾವುದೇ ತಪಾಸಣೆ ಅಧಿಕಾರ ನೀಡಿರುವುದಿಲ್ಲ. ಅವರು ಕೇವಲ ಆಯಾ ಇಲಾಖೆಯ ನಿಯಮಗಳಂತೆ ನಡೆಯುವ ತಪಾಸಣೆಗಳ ಮಾಹಿತಿಯನ್ನು ಕ್ರೋಢೀಕರಿಸಿ ಸಲ್ಲಿಸಲು ಮಾತ್ರ ಸೂಚಿಸಲಾಗಿತ್ತು. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಜನ ಸ್ಪಂದನ) ವಿಭಾಗದಿಂದ ಎಲ್ಲಾ ದೂರು ಹಾಗೂ ಕುಂದುಕೊರತೆಗಳ ವಿಲೇ ಬಗ್ಗೆ ಆಗಿಂದಾಗ್ಗೆ ಫಾಲೋ ಅಪ್ ಮಾಡುತ್ತಿರುವುದರಿಂದ ಅವುಗಳಲ್ಲಿ ಜಾಗೃತ ವಿಷಯಗಳಿಗೆ ಸಂಬಂಧಿಸಿದ ದೂರುಗಳು ಸಹ ಸೇರಿರುವುದರಿಂದ ಪುನ: ಸದರಿ ಮಾಹಿತಿಯನ್ನು ಜಾಗೃತ ವಿಭಾಗದಿಂದ ಪಡೆಯುವುದು Duplication of Efforts ಆಗಿ ಸಂಬಂಧಪಟ್ಟ ಎಲ್ಲಾ ಅಧಿಕಾರಿ/ಸಿಬ್ಬಂದಿಗಳ ಸಮಯ ಮತ್ತು ಸಂಪನ್ಮೂಲ ವ್ಯರ್ಥವಾಗುತ್ತಿದೆ. ಅಭಿಯೋಜನಾ ಮಂಜೂರಾತಿ ಪ್ರಸ್ತಾವನೆಗಳ ಪ್ರಗತಿಯ ಬಗ್ಗೆ ಆಗಿಂದಾಗ್ಗೆ ಪರಿಶೀಲಿಸಲು ಪ್ರಸ್ತುತ ಆನ್‌ಲೈನ್ ಫಾಲೋ ಅಪ್ ಸಲುವಾಗಿ ಇ-ಆಡಳಿತ ಇಲಾಖೆಯ ಮುಖಾಂತರ ಒಂದು ಅಪ್ಲಿಕೇಷನ್‌ನ್ನು ಸಿದ್ಧಪಡಿಸಲಾಗಿದ್ದು, ಎಲ್ಲಾ ಸಚಿವಾಲಯದ ಮುಖ್ಯ ಜಾಗೃತಾಧಿಕಾರಿಗಳಿಗೆ ಒಂದು ಲಾಗಿನ್ ಸೃಜಿಸಲಾಗಿರುತ್ತದೆ. ಸದರಿ ಅಪ್ಲಿಕೇಷನ್ ಮುಖಾಂತರವೇ ಅಭಿಯೋಜನಾ ಮಂಜೂರಾತಿ ಪ್ರಸ್ತಾವನೆಗಳ ಹಾಗೂ ಇಲಾಖಾ ವಿಚಾರಣೆ ಪ್ರಕರಣಗಳ ಪ್ರಗತಿಯನ್ನು ಫಾಲೋ ಅಪ್ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಮೇಲೆ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ:06.07.2016ರ ಆದೇಶದಲ್ಲಿ ನಮೂದಿಸಿದ 4-ಪ್ರಪತ್ರಗಳನ್ನು ಮ್ಯಾನುಯಲ್ ಆಗಿ ಕಳುಹಿಸಬೇಕೆಂಬುದಿರುವುದನ್ನು ಕೈಬಿಡಲು ಸರ್ಕಾರವು ತೀರ್ಮಾನಿಸಿ, ಸದರಿ ಆದೇಶವನ್ನು ಹಿಂಪಡೆದು ಜಾಗೃತ ಕೋಶಗಳ ಮುಖ್ಯಸ್ಥರಾಗಿರುವ ಮುಖ್ಯ ಜಾಗೃತ ಅಧಿಕಾರಿ ಹಾಗೂ ಜಾಗೃತ ಅಧಿಕಾರಿಗಳ ಕರ್ತವ್ಯಗಳನ್ನು ಪರಿಷ್ಕರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯ 2016 (ಭಾಗ-1),**

**ಬೆಂಗಳೂರು, ದಿನಾಂಕ:22.02.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರದ ಸಚಿವಾಲಯವನ್ನೊಳಗೊಂಡಂತೆ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆಗಳು/ಶಾಸನಬದ್ಧ ಸಂಸ್ಥೆಗಳು/ವಿಭಾಗ/ ಜಿಲ್ಲಾ ಮಟ್ಟದ ಕಛೇರಿಗಳಲ್ಲಿ ಸೃಜಿಸಲಾಗಿರುವ ಜಾಗೃತ ಕೋಶಗಳ (Vigilance Cells) ಮುಖ್ಯಸ್ಥರಾದ **ಮುಖ್ಯ ಜಾಗೃತ ಅಧಿಕಾರಿ** ಹಾಗು **ಜಾಗೃತ ಅಧಿಕಾರಿಗಳ** ಕರ್ತವ್ಯಗಳನ್ನು ಈ ಕೆಳಕಂಡಂತೆ ನಿರ್ದಿಷ್ಟಪಡಿಸಲಾಗಿದೆ:-

**(ಅ) ಮುಂಜಾಗ್ರತಾ ಕ್ರಮಗಳಿಗೆ (Preventive Vigilance) ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ ಹಾಗು ಜಾಗೃತ ಅಧಿಕಾರಿಗಳ ಕರ್ತವ್ಯಗಳು:-**

(1) ಭ್ರಷ್ಟಾಚಾರ ಅಥವಾ ಅಕ್ರಮಗಳ ಸಂಭವನೆಯ ಅವಕಾಶಗಳನ್ನು ತೊಡೆದುಹಾಕಲು ಅಥವಾ ಕಡಿಮೆ ಮಾಡುವ ದೃಷ್ಟಿಯಿಂದ ಇಲಾಖೆ/ಸಂಸ್ಥೆಗಳಿಗೆ ಅನ್ವಯವಾಗುವ ಅಧಿನಿಯಮಗಳನ್ನು ಹಾಗೂ ಇಲಾಖೆ/ಸಂಸ್ಥೆಗಳಲ್ಲಿ ಅಸ್ತಿತ್ವದಲ್ಲಿರುವ ನಿಯಮಾವಳಿಗಳು ಹಾಗೂ ಕಾರ್ಯ ವಿಧಾನಗಳನ್ನು ವಿವರವಾಗಿ ಪರಿಶೀಲಿಸುವುದು. ಹಾಗೂ ಅದರಂತೆ ಅವಶ್ಯಕ ಹೊಸ

ನಿಯಮಾವಳಿ ಅಥವಾ ತಿದ್ದುಪಡಿಗಳ ಬಗ್ಗೆ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರಿಗೆ ಪ್ರಸ್ತಾವನೆಗಳನ್ನು ಸಲ್ಲಿಸುವುದು.

(2) ವ್ಯವಸ್ಥೆಯ ವೈಫಲ್ಯಗಳು ಮತ್ತು ಭ್ರಷ್ಟಾಚಾರ ಅಥವಾ ಅಕ್ರಮಗಳ ಅಸ್ತಿತ್ವವನ್ನು ಪತ್ತೆ ಹಚ್ಚಲು ಅನಿರೀಕ್ಷಿತ ತಪಾಸಣೆ ಮತ್ತು ನಿಯಮಿತ ತಪಾಸಣೆಗಳನ್ನು ಕಾಲಕಾಲಕ್ಕೆ ಹೊರಡಿಸಲಾದ ಆಯಾ ಇಲಾಖೆಗಳ ಆದೇಶ/ಸುತ್ತೋಲೆಗಳನ್ವಯ ಸಂಬಂಧಪಟ್ಟ ಅಧಿಕಾರಿಗಳು ಅನುಷ್ಠಾನಗೊಳಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದು.

**(ಆ) <u>ದಂಡನಾತ್ಮಕ ಕ್ರಮಗಳಿಗೆ(Punitive Vigilance) ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ ಹಾಗು ಜಾಗೃತ ಅಧಿಕಾರಿಗಳ ಕರ್ತವ್ಯಗಳು</u>:-**

(1) ಭ್ರಷ್ಟಾಚಾರ ನಿಗ್ರಹ ದಳ ಅಥವಾ ಇತರೆ ತನಿಖಾ ಸಂಸ್ಥೆಗಳು ಯಾವುದೇ ಅಧಿಕಾರಿ/ಸಿಬ್ಬಂದಿ ಬಗ್ಗೆ ಮಾಹಿತಿ/ಅನುಮತಿ/ಅಭಿಪ್ರಾಯ/ಸ್ಪಷ್ಟೀಕರಣ/ದಾಖಲೆಗಳನ್ನು ಕೋರಿದಾಗ, 15 ದಿನಗಳೊಳಗೆ ಮಾಹಿತಿ ನೀಡಲು ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು; ಒಂದು ವೇಳೆ ಮಾಹಿತಿಯನ್ನು 15 ದಿನಗಳೊಳಗೆ ನೀಡದಿದ್ದಲ್ಲಿ, ವಿಷಯವು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು/ಕಾರ್ಯದರ್ಶಿಯ ಹಂತಕ್ಕೆ ವರ್ಗಾಯಿಸಲ್ಪಡುತ್ತದೆ ಹಾಗೂ ಒಟ್ಟಾರೆ 30 ದಿನಗಳೊಳಗಾಗಿ ಮಾಹಿತಿ ನೀಡುವುದು ಕಡ್ಡಾಯವಾಗಿರುತ್ತದೆ.

(2) ಭ್ರಷ್ಟಾಚಾರ ನಿಗ್ರಹ ದಳ ಅಥವಾ ಇತರೆ ತನಿಖಾ ಸಂಸ್ಥೆಗಳು ಅಭಿಯೋಜನಾ ಮಂಜೂರಾತಿ ಕೋರಿ ಸಲ್ಲಿಸುವ ಪ್ರಸ್ತಾವನೆಗಳನ್ನು ನಿಗದಿತ ಅವಧಿಯೊಳಗೆ ವಿಲೇಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು.

(3) ಭ್ರಷ್ಟಾಚಾರ ನಿಗ್ರಹ ದಳ ಅಥವಾ ಇತರೆ ತನಿಖಾ ಸಂಸ್ಥೆಗಳು ಅಮಾನತ್ತು/ವರ್ಗಾವಣೆಗೆ ಶಿಫಾರಸ್ಸು ಮಾಡುವ ಪ್ರಕರಣಗಳಲ್ಲಿ ಯಾವುದೇ ವಿಳಂಬವಿಲ್ಲದೇ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು.

(4) ಮಾನ್ಯ ರಾಜ್ಯಪಾಲರ ಸಚಿವಾಲಯ/ಮಾನ್ಯ ಮುಖ್ಯಮಂತ್ರಿಯವರ ಸಚಿವಾಲಯ/ಜನಸ್ಪಂದನ ವಿಭಾಗ/ ಸಾರ್ವಜನಿಕರಿಂದ ಸ್ವೀಕರಿಸಲಾದ/ಇಲಾಖೆಯಲ್ಲಿ ಸ್ವಯಂ ಪ್ರೇರಿತವಾಗಿ ದಾಖಲಿಸಲಾಗುವ ಜಾಗೃತ ವಿಷಯಗಳಿಗೆ ಸಂಬಂಧಿಸಿದ ದೂರುಗಳನ್ನು ಸ್ವೀಕರಿಸುವುದು. ಸದರಿ ದೂರುಗಳನ್ನು ಪರಿಶೀಲಿಸಿ, ದೂರುಗಳ ತೀವ್ರತೆಯನ್ನಾಧರಿಸಿ, ಭ್ರಷ್ಟಾಚಾರ ನಿಗ್ರಹ ದಳ ಅಥವಾ ಲೋಕಾಯುಕ್ತ ಸಂಸ್ಥೆ ಅಥವಾ ಇಲಾಖಾ ವಿಚಾರಣೆಗೆ ವಹಿಸುವ ಬಗ್ಗೆ ಅಥವಾ ಇನ್ನಾವುದೇ ಸೂಕ್ತ ಕ್ರಮವನ್ನು ಸಮುಚಿತ ಮಾರ್ಗದಲ್ಲಿ ತೆಗೆದುಕೊಳ್ಳುವಂತೆ ನೋಡಿಕೊಳ್ಳುವುದು. ಹಾಗು ಈ ವಿಚಾರದಲ್ಲಿ ಸಂದೇಹವಿದ್ದಲ್ಲಿ ವಿಷಯವನ್ನು ಸಂಬಂಧಪಟ್ಟ <u>ಆಡಳಿತ ಇಲಾಖೆಯ ಮುಖ್ಯಸ್ಥರಿಗೆ ಸಲ್ಲಿಸುವುದು. ಅಲ್ಲದೇ, ಸಾಮಾನ್ಯವಾಗಿ ಕೆಳಕಂಡ ರೀತಿಯ ಪ್ರಕರಣಗಳನ್ನು ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗಾಗಿ ವಹಿಸಲು ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು</u>;

(i) ಲಂಚ, ಭ್ರಷ್ಟಾಚಾರ, ಫೋರ್ಜರಿ, ವಂಚನೆ, ವಿಶ್ವಾಸ ವಂಚನೆ (criminal breach of trust) ಖೊಟ್ಟಿ ದಾಖಲಾತಿ ಇತ್ಯಾದಿ ಆರೋಪಗಳಿಗೆ ಸಂಬಂಧಿಸಿದ ದೂರುಗಳು;

(ii) ಅಕ್ರಮ ಆಸ್ತಿ ಪ್ರಕರಣಗಳಿಗೆ ಸಂಬಂಧಿಸಿದ ದೂರುಗಳು;

(iii) ತಜ್ಞ ಪೊಲೀಸ್ ತನಿಖೆಯ ಅವಶ್ಯಕತೆ ಇರುವ ಸಂಕೀರ್ಣ ಸ್ವರೂಪದ ಪ್ರಕರಣಗಳು;

(5) ಇಲಾಖಾ ವಿಚಾರಣಾ ಪ್ರಕರಣಗಳಲ್ಲಿ ವಿಚಾರಣಾಧಿಕಾರಿ ಹಾಗು ಮಂಡನಾಧಿಕಾರಿಗಳನ್ನು ಆಯಾ ಶಿಸ್ತು ಪ್ರಾಧಿಕಾರಿಗಳು ನೇಮಿಸುವಲ್ಲಿ ಯಾವುದೇ ವಿಳಂಬ ಆಗದಿರುವುದನ್ನು ಖಚಿತಪಡಿಸಿಕೊಳ್ಳುವುದು; ಹಾಗು ವಿಚಾರಣಾಧಿಕಾರಿಗಳ ವಿಚಾರಣಾ ವರದಿಗಳ ಮೇಲೆ ಶಿಸ್ತು ಪ್ರಾಧಿಕಾರಿಗಳು ಅಂತಿಮ ಆದೇಶಗಳನ್ನು ಸೂಕ್ತವಾದ ರೀತಿಯಲ್ಲಿ ಹಾಗು ನಿಗದಿತ ಕಾಲದಲ್ಲಿ ಹೊರಡಿಸುವುದನ್ನು ಖಚಿತಪಡಿಸಿಕೊಳ್ಳುವುದು; ಇಲಾಖಾ ವಿಚಾರಣಾ ಪ್ರಕರಣಗಳ ಪ್ರಗತಿಯನ್ನು ಆಗ್ಗಿಂದ್ದಾಗ್ಗೆ ಗಮನಿಸಿ(monitor), ಇಲಾಖಾ ವಿಚಾರಣಾ ಪ್ರಕರಣಗಳಲ್ಲಿ ಅನಗತ್ಯ ವಿಳಂಬವಾಗುತ್ತಿದ್ದಲ್ಲಿ, ಇದನ್ನು ಶಿಸ್ತು ಪ್ರಾಧಿಕಾರಗಳ ಗಮನಕ್ಕೆ ತಂದು, ಸದರಿ ಪ್ರಕರಣಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಅಗತ್ಯ ಕ್ರಮಕೈಗೊಳ್ಳುವುದು.

(6) ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರನ್ವಯ ಮಾನ್ಯ ಲೋಕಾಯುಕ್ತ/ ಉಪಲೋಕಾಯುಕ್ತರಿಂದ ಸ್ವೀಕೃತವಾಗುವ ಕಲಂ 12(1) ಹಾಗೂ ಕಲಂ 12(3)ರ ವರದಿಗಳ ಆಧಾರದ ಮೇಲೆ ಸದರಿ ಅಧಿನಿಯಮದಡಿಯಲ್ಲಿ ನಿಗದಿಪಡಿಸಲಾದ ಶಾಸನಾಪೇಕ್ಷಿತ ಕಾಲಾವಧಿಯೊಳಗೆ ಕೈಗೊಂಡ ಇಲ್ಲವೇ ಕೈಗೊಳ್ಳಲು ಉದ್ದೇಶಿಸಿದ ಕ್ರಮದ ಬಗ್ಗೆ ಸಕ್ಷಮ ಪ್ರಾಧಿಕಾರವು ಲೋಕಾಯುಕ್ತ/ಉಪಲೋಕಾಯುಕ್ತರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ವರದಿಗಳನ್ನು ಸಲ್ಲಿಸುವುದರಲ್ಲಿ ಅನಗತ್ಯ ವಿಳಂಬವನ್ನು ತಡೆಯಲು ಅಗತ್ಯ ಕ್ರಮಕೈಗೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್.ರೋಹಿಣಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಜಾಗೃತ ವಿಭಾಗ).

**ಇವರಿಗೆ:**

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ ವಿಭಾಗ, ಬೆಂಗಳೂರು – ಇದನ್ನು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 500 ಪ್ರತಿಗಳನ್ನು ಒದಗಿಸಲು **(ಮುಖ ಪತ್ರದೊಂದಿಗೆ)**

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.–560 001.
2. ಪ್ರಧಾನ ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು–560 001.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು–560 001.
4. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.

6. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ–1/2.
7. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
8. ಅಪರ ಪೊಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಖನಿಜ ಭವನ, ಬೆಂಗಳೂರು.
9. ರಾಜ್ಯಪಾಲರ ಜಂಟಿ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
11. ಎಲ್ಲಾ ಇಲಾಖಾ ಮುಖ್ಯಸ್ಥರು.
12. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
13. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
14. ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
15. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
16. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
17. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ಶಾಖಾಧಿಕಾರಿಗಳು.
18. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

**ಈ ಆದೇಶವು <u>http://www.karnataka.gov.in/Pages/kn.aspx</u> ನಲ್ಲಿಯೂ ಲಭ್ಯವಿರುತ್ತದೆ.**